**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ/462/ಎಸಿಎಂ(2)/2012-13

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು - 560 001,
ದಿನಾಂಕ:10-05-2013.

**-:: ಸುತ್ತೋಲೆ ::-**

**ವಿಷಯ:** 2013-14ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ On-Line Interactive Counselling ಮೂಲಕ ಸೀಟು ಹಂಚಿಕೆ ಡಿಪ್ಲೋಮಾ ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅರ್ಜಿ ಮತ್ತು ಮಾಹಿತಿ ಪುಸ್ತಕಗಳನ್ನು ವಿತರಿಸುವ ಬಗ್ಗೆ.

**-0000000-**

2013-14ನೇ ಸಾಲಿನಲ್ಲಿ ರಾಜ್ಯದಲ್ಲಿನ ಸರ್ಕಾರಿ, ಅನುದಾನಿತ ಮತ್ತು ಸ್ವ-ಇಚ್ಛೆಯಿಂದ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟು ಕೊಡುವ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ, ರಾಜ್ಯದ 11 On-Line Interactive Counselling ಕೇಂದ್ರಗಳ ಮೂಲಕ ಸೀಟು ಆಯ್ಕೆ ಪ್ರಕ್ರಿಯೆಯನ್ನು ನಡೆಸಬೇಕಾಗಿದ್ದು, ಅದರಂತೆ, ಪ್ರವೇಶ ಬಯಸುವ ಅಭ್ಯರ್ಥಿಗಳಿಗೆ ಪ್ರವೇಶ ಅರ್ಜಿ ಮತ್ತು ಮಾಹಿತಿ ಪುಸ್ತಕಗಳನ್ನು ವಿತರಿಸುವ ಹಾಗೂ ಸ್ವೀಕೃತಿ ಕುರಿತು ಈಗಾಗಲೇ ದಿನಾಂಕ:06-05-2013ರಂದು ಸಭೆ ನಡೆಸಿ ತೀರ್ಮಾನಿಸಲಾಗಿರುತ್ತದೆ.

ಪ್ರಯುಕ್ತ, ಅರ್ಜಿ ಮತ್ತು ಮಾಹಿತಿ ಪುಸ್ತಕಗಳನ್ನು ಮುದ್ರಿಸಲಾಗುತ್ತಿದ್ದು ರಾಜ್ಯದ 45 ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ (**ದಾಖಲಾತಿಗಳ ಪರಿಶೀಲನಾ ಕೇಂದ್ರ**) ಗಳ ಇಬ್ಬರು ಸಿಬ್ಬಂದಿಯವರನ್ನು ನಿಯೋಜಿಸಿ ಅರ್ಜಿ ಮತ್ತು ಮಾಹಿತಿ ಪುಸ್ತಕಗಳನ್ನು ಸ್ವೀಕರಿಸುವ ಸಲುವಾಗಿ ದಿನಾಂಕ:15-05-2013ರಂದು ಈ ಕಛೇರಿಗೆ ಬಂದು ತಪ್ಪದೇ ಹಾಜರಾಗಲು ಸಂಬಂಧಪಟ್ಟ ಪ್ರಿನ್ಸಿಪಾಲರುಗಳಿಗೆ ಸೂಚಿಸಲಾಗಿದೆ.

**ಜಂಟಿ ನಿರ್ದೇಶಕರು(ಆಡಳಿತ)**

**ಗೆ,**

**ರಾಜ್ಯದ ಎಲ್ಲಾ 45 ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳಿಗೆ**

**ಪ್ರತಿ:-**

1. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂ.ಶಿ.ನಿ, ಬೆಂಗಳೂರು.
2. ನಿರ್ದೇಶಕರ ಆಪ್ತಶಾಖೆಗೆ.
3. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ. ಬೆಂಗಳೂರು - ಸದರಿ ಪ್ರಕಟಣೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
4. ಕಛೇರಿ ಪ್ರತಿ.

File 462-12(Dip_Adm_2013)